ಪ್ರತಿಬಿಂಬ

PRATIBIMBA – Multidisciplinary Kannada Research Journal of IIMRD
ISSN: 2582-2284
Vol-2 Issue 1, Jul-Aug 2020, 20-25
©*IIMRD*, Mysuru
IIMRD JOURNALS
www.iimrd.com

# ಗ್ರಾಮ ಪಂಚಾಯತಿಗಳಲ್ಲಿ ಮಕ್ಕಳ ವಿಶೇಷ ಗ್ರಾಮಸಭೆಯ ಪರಿಣಾಮಕಾರಿ ಅನುಷ್ಠಾನ: ಒಂದು ವಿಶ್ಲೇಷಣೆ

ಡಾ. ಹೇಮಾಂಬರ ಎಚ್.ಎಸ್[1]

**ಪೀಠಿಕೆ**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ (3 ಹೆಚ್)ರಲ್ಲಿ ಪ್ರಸ್ಥಾಪಿಸಿರುವಂತೆ, ಗ್ರಾಮ ಪಂಚಾಯತಿಗಳಲ್ಲಿ ಆಯೋಜಿಸಲಾಗುವ "ವಿಶೇಷ ಸಭೆ" ಗಳಲ್ಲಿ, ಮಕ್ಕಳ ರಕ್ಷಣೆ ಹಾಗೂ ಪೋಷಣೆಗೆ ಪ್ರತ್ಯೇಕವಾಗಿ ಮಕ್ಕಳ ವಿಶೇಷ ಗ್ರಾಮ ಸಭೆಯನ್ನು ಆಯೋಜಿಸಲು ಅವಕಾಶ ಕಲ್ಪಿಸಿರುತ್ತದೆ. ಈ ಸಭೆಯಲ್ಲಿ ವಿಶೇಷವಾಗಿ ಮಕ್ಕಳಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಿ ಪಂಚಾಯತಿ ಮಟ್ಟದಲ್ಲಿ ಮಕ್ಕಳ ಹಕ್ಕುಗಳ ಕುರಿತು ನಿರ್ಣಯಗಳನ್ನು ಕೈಗೊಳ್ಳಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 367 ಗ್ರಾಪಂಅ 2006 ದಿನಾಂಕ: 18.09.2006ರ ಆದೇಶದಂತೆ ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 108 ಗ್ರಾಪಂಅ 2007 ದಿನಾಂಕ: 30.10.2007ರ ಮಕ್ಕಳ ಗ್ರಾಮಸಭೆಯ ರೂಪುರೇಷೆಗಳ ಬಗ್ಗೆ ಮಾರ್ಗಸೂಚಿ ಹಾಗೂ ಸರ್ಕಾರದ ಆದೇಶದಂತೆ ಹಾಗೂ ದಿನಾಂಕ: 29.08.2017 ಮತ್ತು 17.08.2017ರಲ್ಲಿ ನಿರ್ದೇಶಕರು ಪಂಚಾಯತ್ ರಾಜ್–2 ರವರ ಪತ್ರ ಸಂಖ್ಯೆ ಗ್ರಾಅಪ 143 ಜಿಪಂಸ 2019 ದಿನಾಂಕ:28.10.2019 ಪತ್ರದ ಆದೇಶದಂತೆ ಗ್ರಾಮಪಂಚಾಯತಿ ಮಟ್ಟದಲ್ಲಿ ಮಕ್ಕಳ ವಿಶೇಷ ಗ್ರಾಮಸಭೆಗಳನ್ನು ಆಯೋಜಿಸುವಂತೆ ಸುತ್ತೋಲೆಗಳನ್ನು ಹೊರಡಿಸಲಾಗಿದೆ.

ಈ ಹಿಂದಿನಿಂದಿಲೂ ಗ್ರಾಮ ಪಂಚಾಯತಿ ಮಟ್ಟದಲ್ಲಿ ಪ್ರತಿ ವರ್ಷದ ನವೆಂಬರ್ ತಿಂಗಳಲ್ಲಿ ಮಕ್ಕಳ ಗ್ರಾಮಸಭೆಯ ಆಯೋಜನೆಯನ್ನು ಹಮ್ಮಿಕೊಳ್ಳತ್ತಾ ಬಂದಿದ್ದೇ ಆದರೂ ಸಹ ಇತ್ತೀಚಿನ ದಿನಗಳಲ್ಲಿ ಮಕ್ಕಳನ್ನು ಸದೃಢ ಮತ್ತು ಸ್ವಾವಲಂಬಿಯಾಗಿಸುವ ದೃಷ್ಟಿಯಿಂದ, ಮಕ್ಕಳ ಬೆಳವಣಿಗೆಗೆ ಹೆಚ್ಚು ಒತ್ತು ನೀಡುವುದರ ಮೂಲಕ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಾರ್ಯಕ್ಷೇತ್ರದ ಭಾಗೀದಾರರುಗಳಾದ ಮಕ್ಕಳು, ಪೋಷಕರು, ಅಂಗನವಾಡಿ ಕಾರ್ಯಕರ್ತೆಯರು, ಮೇಲ್ವಿಚಾರಕಿಯರು, ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ಎಲ್ಲಾ ಶಿಕ್ಷಕರು, ಪೋಲಿಸ್ ಅಧಿಕಾರಿಗಳು, ಕಾರ್ಮಿಕ ಇಲಾಖೆ, ಪಂಚಾಯತ್ ರಾಜ್ ಇಲಾಖೆ, ಮಕ್ಕಳ ಕಲ್ಯಾಣ ಸಮಿತಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕರ್ನಾಟಕ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬಾಲ ನ್ಯಾಯ ಮಂಡಳಿ ಎಲ್ಲಾ ತಾಲೂಕು ಮತ್ತು ಗ್ರಾಮ ಪಂಚಾಯತಿ ಮಟ್ಟದ ಅಧಿಕಾರಿಗಳು ಮತ್ತು ಸ್ಥಳೀಯ ಸ್ವಯಂ ಸೇವಾ ಸಂಸ್ಥೆಯ ಪ್ರತಿನಿಧಿಗಳು, ಮಕ್ಕಳ ವಿಶೇಷ ಗ್ರಾಮ ಸಭೆಯಲ್ಲಿ ಪಾಲ್ಗೊಳ್ಳುವುದನ್ನು ಕಡ್ಡಾಯಪಡಿಸಲಾಗಿದೆ. ಇಂತಹ ಭಾಗೀದಾರರ ಪಾಲ್ಗೊಳ್ಳುವಿಕೆಯ

[1] *ಬೋಧಕರು, ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಆಡಳಿತ ತರಬೇತಿ ಸಂಸ್ಥೆಯ ಆವರಣ ಮೈಸೂರು,.*

ಮೂಲಕ ಮಕ್ಕಳ ಹಕ್ಕುಗಳು ಮತ್ತು ಅವಕಾಶಗಳ ಬಗ್ಗೆ ಅರಿವು ಮತ್ತು ಜಾಗೃತಿಯನ್ನು ನೀಡಿ ಮಕ್ಕಳನ್ನು ಸಮಾಜದ ಮುಖ್ಯವಾಹಿನಿಗೆ ತರಲು ಕ್ರಮವಹಿಸುವುದು. ಗ್ರಾಮ ಪಂಚಾಯತಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಮಕ್ಕಳಿಗೆ ಸಂಬಂಧಿಸಿದಂತೆ, ಅಪೌಷ್ಟಿಕತೆ, ಶಾಲಾ ದಾಖಲಾತಿ, ಹಾಜರಾತಿ, ಲಸಿಕೆ ಇತರೆ ಪೂರಕ ಮಾಹಿತಿಗಳನ್ನು ನಿಯಮಿತವಾಗಿ ಅಂಕಿ ಸಂಖ್ಯೆ ಕ್ರೋಢೀಕರಿಸುವ ಮಹತ್ವವನ್ನು ತಿಳಿಸುವುದು ಬಹಳ ಮುಖ್ಯವಾಗಿರುತ್ತದೆ.

ಮಕ್ಕಳ ರಕ್ಷಣೆ, ಉಳಿವು ಮತ್ತು ಅಭಿವೃದ್ಧಿ ಇನ್ನಿತರೆ ಚಟುವಟಿಕೆಗಳಲ್ಲಿ ಭಾಗವಹಿಸುವಿಕೆಯ ಹಕ್ಕುಗಳನ್ನು ಜಾರಿಗೊಳಿಸುವಲ್ಲಿ ಗ್ರಾಮ ಪಂಚಾಯತಿಗಳ ಪಾತ್ರ ಬಹಳ ಮುಖ್ಯವಾದುದಾಗಿರುತ್ತದೆ. ಈ ದೃಷ್ಟಿಯಿಂದ ಗ್ರಾಮ ಪಂಚಾಯತಿಗಳಲ್ಲಿ ಹಮ್ಮಿಕೊಳ್ಳಲಾಗಿರುವ ಗ್ರಾಮಸಭೆಗಳಲ್ಲಿ ಮಕ್ಕಳ ಸ್ಥಿತಿ–ಗತಿ, ಮಕ್ಕಳ ಅಭಿವೃದ್ಧಿ ಹಾಗೂ ಸಂವಿಧನಾತ್ಮಕವಾಗಿ ಮಕ್ಕಳಿಗೆ ಒದಗಿಸಿರುವ ಹಕ್ಕುಗಳ ಬಗ್ಗೆ ಗ್ರಾಮ ಪಂಚಾಯತಿಗಳು ವಿಶೇಷವಾಗಿ ಗ್ರಾಮ ಸಭೆಗಳಲ್ಲಿ ಚರ್ಚಿಸಿ, ಪೋಷಕರಿಗೆ, ಗ್ರಾಮಸ್ಥರುಗಳಿಗೆ ಅವರುಗಳ ಜವಾಬ್ದಾರಿಯನ್ನು ತಿಳಿಸುವ ಗುರುತರ ಹೊಣೆಗಾರಿಕೆ ಗ್ರಾಮ ಪಂಚಾಯತಿಯದ್ದಾಗಿರುತ್ತದೆ.

**ಉದ್ದೇಶಗಳು**

ಮಕ್ಕಳ ಗ್ರಾಮ ಸಭೆಯು ಸ್ಥಳೀಯ ಸರ್ಕಾರದ ಮಟ್ಟದಲ್ಲಿ ನಡೆಯುವ ಸಭೆಗಳಲ್ಲಿ ಮಕ್ಕಳು ಸಕ್ರೀಯವಾಗಿ ಭಾಗವಹಿಸಲು ಕಲ್ಪಿಸಲಾಗಿರುವ ಒಂದು ವೇದಿಕೆಯಾಗಿದ್ದು ಈ ಸಭೆಯ ಉದ್ದೇಶಗಳನ್ನು ಈ ಕೆಳಗಿನಂತೆ ವಿವರಿಸಲಾಗಿದೆ.

- ಗ್ರಾಮ ಪಂಚಾಯತಿಗಳು ತನ್ನ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಮಕ್ಕಳಲ್ಲಿ ಶೇಕಡ 100ಕ್ಕೆ 100ರಷ್ಟು ಮಕ್ಕಳಿಗೆ ಚುಚ್ಚು ಮದ್ದು ಲಸಿಕೆಯನ್ನು ಹಾಕಿಸುವಂತೆ ಜಾಗೃತಿ ವಹಿಸಬೇಕು.
- ತಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಎಲ್ಲಾ ಮಕ್ಕಳು ಅಂಗನವಾಡಿ ಮತ್ತು ಶಾಲೆಗಳಿಗೆ ಹಾಜರಾಗುವಂತೆ ನೋಡಿಕೊಳ್ಳುವುದರ ಮೂಲಕ ಹಾಜರಾತಿಯ ಪ್ರಮಾಣ ಪೂರ್ತಿಯಾಗಿರುವಂತೆ ನೋಡಿಕೊಳ್ಳಬೇಕು. 6 ವರ್ಷದೊಳಗೆ ದಾಖಲಾಗಬೇಕಾಗಿರುವ ಮಕ್ಕಳ ಸಂಖ್ಯೆ ಎಷ್ಟು? ಎಷ್ಟು ಮಕ್ಕಳ ದಾಖಲಾಗಿರುತ್ತವೆ? ಯಾವುದಾದರೂ ಮಕ್ಕಳು ದಾಖಲಾಗದೆ ಇದ್ದಲ್ಲಿ ಅವರನ್ನು ಅಂಗನವಾಡಿಗೆ ದಾಖಲು ಮಾಡುವಂತೆ ಸೂಕ್ತ ಕ್ರಮಕೈಗೊಳ್ಳುವುದು.
- ಮಕ್ಕಳು ಶಾಲೆ ಬಿಟ್ಟು ಬಾಲ ಕಾರ್ಮಿಕರಾಗಿ ಕೃಷಿ ಚಟುವಟಿಕೆಗಳನ್ನು ಮಾಡುತ್ತಿದ್ದರೆ, ಅವರನ್ನು ಗುರುತಿಸಿ ಮತ್ತೆ ಶಾಲೆಗೆ ಕರೆತರಲು ಕ್ರಮಗಳನ್ನು ಕೈಗೊಳ್ಳುವುದು.
- ಗ್ರಾಮಗಳನ್ನು ಬಿಟ್ಟು ವಲಸೆ ಹೋಗುತ್ತಿರುವ ಅಲೆಮಾರಿ ಜನಾಂಗದ ಕುಟುಂಬಗಳ ಮಕ್ಕಳು ಇದ್ದರೆ ಆ ಮಕ್ಕಳಿಗೆ ಶಾಲೆಗಳಿಗೆ ತೆರಳುವಂತೆ ಅವಕಾಶ ಕಲ್ಪಿಸುವುದು.
- ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಗ್ರಾಮಗಳ ಅಂಗನವಾಡಿ ಮತ್ತು ಶಾಲೆಗಳಿಗೆ ಶೌಚಾಲಯ ನೀರಿನ ಸೌಲಭ್ಯ, ಶುದ್ದ ಕುಡಿಯುವ ನೀರಿನ ಘಟಕಗಳು, ಲ್ಯಾಬ್ ವ್ಯವಸ್ಥೆ ಹಾಗೂ ಗ್ರಂಥಾಲಯದ ವ್ಯವಸ್ಥೆ ಹೀಗೆ ಎಲ್ಲಾ ರೀತಿಯ ಮೂಲಭೂತ ಸೌಲಭ್ಯಗಳು ಒದಗಿಸಿಕೊಡಲು

ಪ್ರತಿಬಿಂಬ
PRATIBIMBA – Multidisciplinary Kannada Research Journal of IIMRD
IIMRD JOURNALS

ಅಲ್ಲಿನ ಗ್ರಾಮ ಪಂಚಾಯತಿಯ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸೂಕ್ತ ಕ್ರಮವಹಿಸಬೇಕು.

- ಮಕ್ಕಳು ತಮ್ಮ ಹಕ್ಕುಗಳು, ಸಮಸ್ಯೆಗಳ ಹಾಗೂ ತಮ್ಮಲ್ಲಿನ ಪ್ರತಿಭೆಗಳನ್ನು ವ್ಯಕ್ತಪಡಿಸಲು ಅಗತ್ಯವಾದ ಪೋಸ್ಟರ್, ಬ್ಯಾನರ್ ಚಿತ್ರಕಲೆ ಹಾಡು ಕಥೆಗಳನ್ನು ರಚಿಸಲು ಮತ್ತು ತಮ್ಮ ಕಲೆಯನ್ನು ಪ್ರದರ್ಶಿಸಲು ವೇದಿಕೆ ಒದಗಿಸುವುದು.
- ಮಕ್ಕಳ ಗ್ರಾಮ ಸಭೆಯಲ್ಲಿ ವಿಶೇಷವಾಗಿ ಹೆಣ್ಣುಮಕ್ಕಳ ಪೋಷಣೆ ಹಾಗೂ ರಕ್ಷಣೆ, ಬಾಲ್ಯವಿವಾಹದ ದುಷ್ಪರಿಣಾಮಗಳು ಹಾಗೂ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ಕುರಿತು ಜಾಗೃತಿ ಮೂಡಿಸುವುದರ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.
- ಮಹಾತ್ಮಾಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಅಂಗನವಾಡಿ ಮತ್ತು ಶಾಲೆಗಳಿಗೆ ಕಾಂಪೌಂಡ್ ಮತ್ತು ಶೌಚಾಲಯ ನಿರ್ಮಿಸುವುದು. ಹಾಗೂ ಇತ್ತೀಚಿನ ದಿನಗಳಲ್ಲಿ ಎಲ್ಲಾ ಮಕ್ಕಳಲ್ಲಿ ಅಪೌಷ್ಟಿಕತೆ ಕಂಡು ಬರುತ್ತಿದ್ದು ಇದನ್ನು ಹೋಗಲಾಡಿಸುವ ದೃಷ್ಟಿಯಿಂದ ಅಂಗನವಾಡಿ ಮತ್ತು ಶಾಲೆಯ ಸುತ್ತಾ ಕೈ ತೋಟವನ್ನು ನಿರ್ಮಾಣ ಮಾಡುವುದರ ಮೂಲಕ ಶಾಲೆ ಮತ್ತು ಅಂಗನವಾಡಿಗಳಲ್ಲಿ ತರಕಾರಿಗಳನ್ನು ಬೆಳೆಯುವದರ ಮೂಲಕ ಮಕ್ಕಳಲ್ಲಿ ಅಪೌಷ್ಟಿಕತೆಯನ್ನು ನಿವಾರಿಸುವುದು.
- ಮಕ್ಕಳ ವಿಶೇಷ ಗ್ರಾಮ ಸಭೆಯನ್ನು ಆಯೋಜನೆ ಮಾಡುವಾಗ ಬೇರೆ ಕಾರ್ಯಕ್ರಮವನ್ನು ಈ ಸಭೆಯೊಂದಿಗೆ ಒಗ್ಗೂಡಿಸಬಾರದು. ಈ ಕಾರ್ಯಕ್ರಮದಲ್ಲಿ ಮಕ್ಕಳ ಹಿತವನ್ನು ಕಾಪಾಡುವ ವಿಷಯಗಳಿಗೆ ಮಾತ್ರ ಸೀಮಿತವಾಗಿರಬೇಕು.
- ಮಕ್ಕಳ ವಿಶೇಷ ಗ್ರಾಮ ಸಭೆಯನ್ನು ಏರ್ಪಡಿಸುವಾಗ ಸಭೆಯಲ್ಲಿ ಭಾಗವಹಿಸಲಿರುವ ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಎಲ್ಲಾ ಮಕ್ಕಳು ಬಂದು ಅನುಕೂಲವಿರುವ ಜಾಗ, ಸದರಿ ಜಾಗದಲ್ಲಿ ಮಕ್ಕಳಿಗೆ ಕುಳಿತುಕೊಳ್ಳಲು ಅನುಕೂಲವಾದ ಸ್ಥಳಾವಕಾಶ, ಕುಡಿಯುವ ನೀರು, ಶೌಚಾಲಯ ಸೌಲಭ್ಯ, ಪ್ರಥಮ ಚಿಕಿತ್ಸೆ ಮತ್ತು ಪೆಂಡಾಲ್ ವ್ಯವಸ್ಥೆಯನ್ನು ಏರ್ಪಡಿಸುವುದರ ಮೂಲಕ ಯಶಸ್ವಿಯಾಗಿ ಮಕ್ಕಳ ವಿಶೇಷ ಗ್ರಾಮಸಭೆಗಳನ್ನು ಆಯೋಜನೆಯ ಮಾಡುವ ನಿಟ್ಟಿನಲ್ಲಿ ಗ್ರಾಮ ಪಂಚಾಯತಿಗಳು ವ್ಯವಸ್ಥೆಗೊಳಿಸಬೇಕಾಗುತ್ತದೆ

**ವಿಶೇಷ ಗ್ರಾಮಸಭೆಗಳನ್ನು ಕೈಗೊಳ್ಳುವಾಗ ಮುಖ್ಯವಾದ ಅಂಶಗಳು ಈ ಕೆಳಕಂಡಂತಿದೆ.**

- ಶೇಕಡ 1/3ರಷ್ಟು ಮತದಾರರು ಕೋರಿಕೆ ಸಲ್ಲಿಸಿದರೆ ವಿಶೇಷ ಗ್ರಾಮ ಸಭೆಯನ್ನು ಕರೆಯುವುದು.
- ಲಿಖಿತ ಮನವಿಯಲ್ಲಿ ವಿಷಯವನ್ನು ನಿರ್ದಿಷ್ಟ ಪಡಿಸುವುದು.
- ಮೂರು ತಿಂಗಳ ಅವಧಿಯೊಳಗೆ 2 ವಿಶೇಷ ಗ್ರಾಮ ಸಭೆಯನ್ನು ಕರೆಯುವಂತಿಲ್ಲ.
- ಮಕ್ಕಳ ವಿಶೇಷ ಗ್ರಾಮ ಸಭೆ ಆಯೋಜಿಸುವುದು.

**ಮಕ್ಕಳ ವಿಶೇಷ ಗ್ರಾಮ ಸಭೆಯಲ್ಲಿ ಚರ್ಚಿಸಬೇಕಾದಂತಹ ವಿಷಯಗಳು**

ಮೊದಲನೆಯದಾಗಿ ಮಕ್ಕಳ ವಿಶೇಷ ಗ್ರಾಮ ಸಭೆಯಲ್ಲಿ ಗ್ರಾಮ ಪಂಚಾಯತಿಯನ್ನು ಪರಿಚಯಿಸುತ್ತಾ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಮುಖ್ಯ ಲಕ್ಷಣಗಳು(ಹೊಸತಿದ್ದುಪಡಿಗಳಲ್ಲಿ) ಗ್ರಾಮ ಸ್ವರಾಜ್ ಘಟಕಗಳಾದ ಜನವಸತಿ ಸಭೆ, ವಾರ್ಡ್‌ಸಭೆ ಮತ್ತು ಗ್ರಾಮಸಭೆಗಳ ಕಾರ್ಯನಿರ್ವಹಣೆಯನ್ನು ಮತ್ತು ಸಭಾ ನಿಯಮಾವಳಿಗಳ ಕುರಿತು ಮಕ್ಕಳಿಗೆ ಸಭೆಯಲ್ಲಿ ಪರಿಚಯಿಸುವುದರ ಮೂಲಕ ಗ್ರಾಮ ಪಂಚಾಯತಿಯ ಪ್ರಕಾರ್ಯಗಳ ಬಗ್ಗೆ ವಿವರಣೆ ನೀಡುವುದು ಹಾಗೂ ಇತರೆ ಪ್ರಮುಖ ತಿದ್ದುಪಡಿಯ ಆಶಯಗಳನ್ನು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅನುಷ್ಠಾನಗೊಳಿಸುವ ಜವಾಬ್ದಾರಿಯ ಬಗ್ಗೆ ಅರ್ಥೈಸುವುದು ಬಹಳ ಮುಖ್ಯವಾದುದಾಗಿರುತ್ತದೆ,

**ಮಕ್ಕಳ ಆರೋಗ್ಯಕರ ಬೆಳವಣಿಗೆಗೆ ಪೌಷ್ಠಿಕ ಆಹಾರವನ್ನು ಒದಗಿಸುವುದರ ಬಗ್ಗೆ ಚರ್ಚಿಸುವುದು**

ಮೂರರಿಂದ 6ನೇ ವಯಸ್ಸಿನ ಮಕ್ಕಳಿಗೆ ಅಂಗನವಾಡಿ ಮುಖಾಂತರ ಪೌಷ್ಠಿಕ ಆಹಾರವನ್ನು ಒದಗಿಸುವುದರ ಮೂಲಕ ಅಪೌಷ್ಟಿಕತೆಯನ್ನು ಹೋಗಲಾಡಿಸುವುದರ ಕುರಿತು ಚರ್ಚಿಸುವುದು. {ಸಮಗ್ರ ಶಿಶು ಅಭಿವೃದ್ಧಿ ಸೇವೆಗಳ ಅಡಿಯಲ್ಲಿ ಅಂಗನವಾಡಿಯು ನೀಡುವ ಪೌಷ್ಟಿಕ ಆಹಾರ ಕಾರ್ಯಕ್ರಮಗಳ ಬಗ್ಗೆ ಮೇಲ್ವಿಚಾರಕರು ಸಭೆಗೆ ಹಾಜರಾಗಿ ಮಾಹಿತಿಯನ್ನು ನೀಡುವುದರ ಮೂಲಕ ಮಕ್ಕಳಿಗೆ ಅರಿವು ಮೂಡಿಸುವುದು).

**ಹೆಣ್ಣು ಮಕ್ಕಳ ಪೋಷಣೆ ಹಾಗೂ ರಕ್ಷಣೆಯ ಕುರಿತು ಸರ್ಕಾರಗಳು ಕೈಗೊಂಡಿರುವ ಕ್ರಮಗಳು**

ಕರ್ನಾಟಕ ಗ್ರಾಮಸ್ವರಾಜ್ ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 3–ಎ, 58 ಮತ್ತು 61(2) ಸಿ ರಡಿಯ ನಿರೂಪಣೆಯಂತೆ ಗ್ರಾಮೀಣ ಪ್ರದೇಶದ ಮಹಿಳಾ ಮತ್ತು ಮಕ್ಕಳ ಕಲ್ಯಾಣಗಳಿಗೆ ಪ್ರಮುಖ ವಿಷಯಗಳನ್ನು ಚರ್ಚಿಸಿ ಅವರುಗಳ ಸಾಮಾಜಿಕ ಭದ್ರತೆಗಾಗಿ ಕಾರ್ಯಕ್ರಮವನ್ನು ರೂಪಿಸುವುದು ಪಂಚಾಯತ್ ರಾಜ್ ಸಂಸ್ಥೆಗಳ ಅದರಲ್ಲೂ ಕೆಳಸ್ಥರದ ಹಂತವಾದ ಗ್ರಾಮ ಪಂಚಾಯತಿಯ ಆದ್ಯ ಕರ್ತವ್ಯವಾಗಿದೆ. ರಾಜ್ಯದಲ್ಲಿ ಮಕ್ಕಳ ಅನೈತಿಕ ಚಟುವಟಿಕೆಗೆ ಬಳಸಲು ಮಕ್ಕಳ ಕಳ್ಳಸಾಗಾಟಣೆ ನಡೆಯುತ್ತಿರುವುದಾಗಿ ಪ್ರತಿ ದಿನ ದಿನಪತ್ರಿಕೆಗಳಲ್ಲಿ ವರದಿಯಾಗುತ್ತಿದ್ದು, ಮಕ್ಕಳು ಪೋಷಕರು ಹಾಗೂ ಗ್ರಾಮಸ್ಥರಲ್ಲಿ ಅರಿವು ಮೂಡಿಸಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಬೇಕು ಎನ್ನುವುದನ್ನು ಕುರಿತು ವಿವರಿಸುವುವದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಬೇಕಾಗುತ್ತದೆ.

**ಮಕ್ಕಳ ಹಕ್ಕುಗಳು ಮತ್ತು ರಕ್ಷಣೆಯ ಕುರಿತು ಅರಿವು ಮೂಡಿಸುವುದು**

ಪ್ರತಿ ವರ್ಷ 3 ವರ್ಷದಿಂದ 6 ವರ್ಷದವರೆಗಿನ ಎಲ್ಲಾ ಮಕ್ಕಳು ಅಂಗನವಾಡಿ ಹಾಗೂ 6ರಿಂದ 14ನೇ ವಯಸ್ಸಿನವರೆಗಿನ ಎಲ್ಲಾ ಮಕ್ಕಳು ಶಾಲೆಯಲ್ಲಿ ಶಿಕ್ಷಣ ಪ್ರಾರಂಭಿಸಿರುವ ಬಗ್ಗೆ ಮಾಹಿತಿ ಪಡೆದು ಹೊರಗುಳಿದ ಮಕ್ಕಳನ್ನು ಅಂಗನವಾಡಿ ಮತ್ತು ಶಾಲೆಗೆ ಸೇರಿಸುವಂತೆ ಕ್ರಮವಹಿಸುವಂತೆ ಜಾಗೃತಿ ಮೂಡಿಸುವುದು. ಮಕ್ಕಳ ಹಕ್ಕುಗಳನ್ನು ಪ್ರತಿಪಾದಿಸುವ ಹಾಗೂ ಅವರುಗಳ ಸಾಮಾಜಿಕ, ಭೌತಿಕ ಮತ್ತು ಬೌದ್ಧಿಕ ಹಕ್ಕುಗಳು ಮತ್ತು ರಕ್ಷಣೆಗಾಗಿ ಇರುವ ಕಾರ್ಯಕ್ರಮಗಳ ಕುರಿತು ಅಂಗನವಾಡಿ ಮೇಲ್ವಿಚಾರಕರು ಸಭೆಗೆ ಹಾಜರಾಗಿ ಮಾಹಿತಿಯನ್ನು ನೀಡುವುದು.

**ಬಾಲ್ಯವಿವಾಹ ನಿಷೇಧ ಕಾಯ್ದೆ ಹಾಗೂ ಅದರ ದುಷ್ಪರಿಣಾಮಗಳ ಬಗ್ಗೆ ವಿವರಿಸುವುದು**

ಬಾಲ್ಯ ವಿವಾಹವನ್ನು ತಡೆಗಟ್ಟಲು ರಾಜ್ಯ ಉಚ್ಚನ್ಯಾಯಲಯವು ರಿಟ್ ಅರ್ಜಿ ಸಂಖ್ಯೆ: 11154/2006 ದಿನಾಂಕ: 10.11.2010ರಂದು ನೀಡಿರುವ ನಿರ್ದೇಶನದನ್ವಯ ದಿನಾಂಕ:21.12.1010ರ ಸಂಖ್ಯೆ:310/2010ರಲ್ಲಿ ರಚಿತವಾಗಿದ್ದ ಕೋರ್ ಕಮಿಟಿಯು ಸರ್ಕಾರಕ್ಕೆ ಸಲ್ಲಿಸಿರುವ ಶಿಫಾರಸ್ಸಿನನ್ವಯ ರಾಜ್ಯ ಸರ್ಕಾರವು ಅನುಸರಣ ಕ್ರಮವನ್ನು ಕೈಗೊಳ್ಳುತ್ತಿದೆ. ಈ ಸಂಭಂದವಾಗಿ ಗ್ರಾಮೀಣ ಜನತೆಗೆ ತಿಳುವಳಿಕೆಯನ್ನು ಮೂಡಿಸುವುದು ಗ್ರಾಮ ಪಂಚಾಯತಿಗಳ ಕರ್ತವ್ಯವಾಗಿರುತ್ತದೆ. ಗ್ರಾಮ ಪಂಚಾಯತಿಗಳು ವಾರ್ಡ್‌ಸಭೆ, ಗ್ರಾಮಸಭೆ, ಮಹಿಳಾ ಗ್ರಾಮಸಭೆ ಹಾಗೂ ಮಕ್ಕಳ ವಿಶೇಷ ಸಭೆಗಳಲ್ಲಿ ಬಾಲ್ಯ ವಿವಾಹದಂತಹ ಅನಿಷ್ಟ ಸಾಮಾಜಿಕ ಪಿಡುಗಿನ ಬಗ್ಗೆ ಚರ್ಚಿಸಿ ಇಂತಹ ಅಮಾನವೀಯ ಪದ್ಧತಿಯನ್ನು ತಡೆ ಹಿಡಿಯಲು, ಖಂಡಿಸಲು ಹಾಗೂ ಅಂತಹ ಕೃತ್ಯಗಳು ಪುನರಾವರ್ತನೆಯಾಗದಂತೆ ಜನಸಾಮಾನ್ಯರು ಪೋಷಕರು ಮತ್ತು ಮಕ್ಕಳಲ್ಲಿ ತಿಳುವಳಿಕೆ ಮೂಡಿಸುವುದು ಬಹಳ ಮುಖ್ಯವಾಗಿರುತ್ತದೆ. ಆ ಮೂಲಕ ಬಾಲ್ಯವಿವಾಹ ಪ್ರಕರಣಗಳು ಗ್ರಾಮಗಳಲ್ಲಿ ನಡೆಯುತ್ತಿರುವುದು ಕಂಡುಬಂದಾಗ ಅದನ್ನು ತಡೆಗಟ್ಟುವ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕ್ರಮಗಳ ಬಗ್ಗೆ ಅಂಗನವಾಡಿ ಮೇಲ್ವಿಚಾರಕರು ವಿವರಿಸುವುದು

**ಮಕ್ಕಳ ಬಗ್ಗೆ ನಡೆಯುವ ಲೈಂಗಿಕ ದೌರ್ಜನ್ಯದ ಕುರಿತು ಮಕ್ಕಳಲ್ಲಿ ಜಾಗೃತಿ ಮೂಡಿಸುವುದು**

ಮನೆ ಶಾಲೆ ಅಥವಾ ಕೆಲಸದ ಸ್ಥಳಗಳಲ್ಲಿ ಮಕ್ಕಳ ಮೇಲೆ ಲೈಂಗಿಕ ದೌಜ್ಯನ್ಯ ಸಂಭವಿಸಬಹುದು. ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ಹರಡುವಿಕೆಯು ಮಹಿಳೆಯರಿಗೆ 19.7% ಮತ್ತು ಪುರುಷರಿಗೆ 7.9% ಎಂದು ಅಂದಾಜಿಸಲಾಗಿದೆ. ಸರಿ ಸುಮಾರು 30% ರಷ್ಟು ಮಗುವಿನ ಸಂಭಂದಿಗಳು ಹೆಚ್ಚಾಗಿ ಸಹೋದರರು, ತಂದೆ, ಚಿಕ್ಕಪ್ಪ ಅಥವಾ ಸೋದರ ಸಂಭಂದಿಗಳು, 60% ರಷ್ಟು ಕುಟುಂಬದ ಸ್ನೇಹಿತರು, ಶಿಶುಪಾಲನಾ ಕೇಂದ್ರಗಳು ಅಥವಾ ನೆರೆಯವರಂತಹ ಪರಿಚಯಸ್ಥರು, ಸುಮಾರು 10% ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಅಪರಿಚಿತರುವೆಸಗಿತ್ತಾರೆ. ಈ ದೃಷ್ಟಿಯಿಂದ ಮಕ್ಕಳ ಬಗ್ಗೆ ನಡೆಯುವ ಲೈಂಗಿಕ ದೌರ್ಜನ್ಯದ ಕುರಿತು ಮಕ್ಕಳಲ್ಲಿ ಜಾಗೃತಿ ಮೂಡಿಸುವುದರ ಕುರಿತು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಹಾಜರಾಗಿ ಮಾಹಿತಿಯನ್ನು ನೀಡುವುದು.

**ಜೀತಪದ್ಧತಿ ಹಾಗೂ ಕೃಷಿ ಕಾರ್ಮಿಕ ವೃತ್ತಿಯಲ್ಲಿ ಮಕ್ಕಳನ್ನು ತೊಡಗಿಸಿರುವುದರ ವಿರುದ್ದ ಜಾಗೃತಿ ಮೂಡಿಸುವುದು**

ಗ್ರಾಮಗಳಲ್ಲಿ ಬಾಲ ಕಾರ್ಮಿಕರು ಇರುವುದನ್ನು ಗುರುತಿಸುವುದರ ಮೂಲಕ ಬಾಲ ಕಾರ್ಮಿಕ ಪದ್ಧತಿ ನಿಷೇಧದ ಬಗ್ಗೆ ಗ್ರಾಮಸ್ಥರಲ್ಲಿ ಅರಿವು ಇರುವುದನ್ನು ಪ್ರಸ್ತಾಪಿಸಿ, ಇಲ್ಲದಿದ್ದರೆ ಜಾಗೃತಿ ಮೂಡಿಸುವ ಹಾಗೂ ತಡೆಗಟ್ಟಲು ಗ್ರಾಮದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ಮತ್ತು ನಿಮ್ಮ ಗ್ರಾಮದಲ್ಲಿ ಮಕ್ಕಳು ಶಾಲೇ ಬಿಟ್ಟು ಬಾಲ ಕಾರ್ಮಿಕರಾಗಿ ಕೃಷಿ ಚಟುವಟಿಕೆಗಳನ್ನು ಮಾಡುತ್ತಿದ್ದಾರೆಯೇ, ಮಾಡುತ್ತಿದ್ದಲ್ಲಿ ಅವರನ್ನು ಗುರುತಿಸಿ ಮತ್ತೆ ಶಾಲೆಗೆ ಕರೆತರಲು ಕೈಗೊಂಡಿರುವ ಕ್ರಮಗಳನ್ನು ಕುರಿತು ಸಂಕ್ಷಿಪ್ತವಾಗಿ ವಿವರಣೆ ನೀಡುವುದರ ಮೂಲಕ ಮಕ್ಕಳಿಗೆ ಮತ್ತು ಪೋಷಕರುಗಳಿಗೆ ಅರಿವು ಮೂಡಿಸುವುದರ ಮೂಲಕ

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರಪ್ರಕರಣ (3 ಹೆಚ್)ರಲ್ಲಿ ಪ್ರಸ್ಥಾಪಿಸಿರುವಂತೆ ಗ್ರಾಮಪಂಚಾಯತಿಗಳಲ್ಲಿ ಮಕ್ಕಳ ವಿಶೇಷ ಸಭೆ" ಗಳನ್ನು ಪರಿಣಾಮಕಾರಿಯಾಗಿ ಆಯೋಜಿಸುವುದರ ಮೂಲಕ ಮಕ್ಕಳ ಹಕ್ಕುಗಳ ರಕ್ಷಣೆ ಮಾಡುವುದು ಗ್ರಾಮಪಂಚಾಯತಿಯ ಕರ್ತವ್ಯವಾಗಿರುತ್ತದೆ.

**ಉಪಸಂಹಾರ**

ಒಟ್ಟಾರೆ ಮಕ್ಕಳ ವಿಶೇಷ ಗ್ರಾಮಸಭೆಯಲ್ಲಿ ಮಕ್ಕಳ ರಕ್ಷಣೆಗಾಗಿ ಸರ್ಕಾರ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಾರ್ಯಕ್ರಮಗಳನ್ನು ವಿವರವಾಗಿ ಚರ್ಚಿಸಿ ಪೋಷಕರು ಮತ್ತು ಮಕ್ಕಳಿಗೆ ಹೆಚ್ಚಿನ ತಿಳುವಳಿಕೆ ಹಾಗೂ ಮಾಹಿತಿ ನೀಡುವ ಕಾರ್ಯಕ್ರಮವಾಗಬೇಕಾಗಿದ್ದು, ಮಕ್ಕಳು, ಪೋಷಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸೂಪರ್ ವೈಸರ್‌ಗಳು, ಕಿರಿಯ ಮಹಿಳಾ ಆರೋಗ್ಯಸಹಾಯಕರು ಶಾಲಾ ಶಿಕ್ಷರು, ಶಾಲಾ ಅಭಿವೃದ್ಧಿ ಮತ್ತು ಉಸ್ತುವಾರಿ ಸ್ಥಾಯಿಸಮಿತಿ ಸದಸ್ಯರು, ಪೋಲೀಸ್ ಅಧಿಕಾರಿಗಳು ಸ್ವಯಂಸೇವಾ ಸಂಘದ ಪ್ರತಿನಿಧಿಗಳು, ಕಡ್ಡಾಯವಾಗಿ ಭಾಗವಹಿಸುವುದರ ಜೊತೆಗ ಎಲ್ಲಾ ಅಂಕಿ ಅಂಶಗಳನ್ನು ಗ್ರಾಮ ಪಂಚಾಯತಿಗಳಲ್ಲಿ ಸಂಗ್ರಹಿಸುವುದರ ಮೂಲಕ ಮಕ್ಕಳ ಹಕ್ಕುಗಳ ರಕ್ಷಣೆ ಮಕ್ಕಳ ಬೇಕು ಬೇಡಿಕೆಗಳನ್ನು ಚರ್ಚಿಸಲು ಮಕ್ಕಳಾ ವಿಶೇಷ ಗ್ರಾಮಸಭೆಗಳನ್ನು ನವೆಂಬರ ಮಾಹೆಯಲ್ಲಿ ಆಚರಿಸುವಂತೆ ಕ್ರಮಕೈಗೊಳ್ಳುವುದು ಗ್ರಾಮ ಪಂಚಾಯತಿಗಳ ಪ್ರಮುಖ ಕರ್ತವ್ಯವಾಗಿರುವುದು ಈ ಅಧ್ಯಯನದಿಂದ ಕಂಡುಬಂದಿದೆ.

**ಪರಾಮರ್ಶನ ಗ್ರಂಥಗಳು**


- ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಕಾಯ್ದೆ. ಕರ್ನಾಟಕ ಸರ್ಕಾರ, ಬೆಂಗಳೂರು.
- ಕರ್ನಾಟಕ ವಿಕಾಸ ಮಾಸಪತ್ರಿಕೆ. ವಾರ್ತ ಮತ್ತು ಪ್ರಚಾರ ಇಲಾಖೆ, ಬೆಂಗಳೂರು.
- ಸುತೋಲೆಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು.